# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 938
2. ವಿಧಾನ ಪರಿಷತ್ತು ಸದಸ್ಯರ ಹೆಸರು : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ
3. ಉತ್ತರಿಸುವ ದಿನಾಂಕ : 28/09/2020
4. ಉತ್ತರಿಸುವ ಸಚಿವರು : ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

| ಕ್ರ.ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ | ರಾಜ್ಯದಲ್ಲಿ ಬಾಲಕಾರ್ಮಿಕ ನಿಷೇಧ ಕಾಯ್ದೆ ಜಾರಿಯಾಗಿ ಹಲವಾರು ವರ್ಷಗಳಾಗಿದ್ದರೂ ಇಂದಿಗೂ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಬಾಲಕಾರ್ಮಿಕರು ಕಾರ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕರು ವಿವಿಧ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br>ರಾಜ್ಯ ಸರ್ಕಾರವು ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ(ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986 ಅನ್ನು ರಾಜ್ಯಾದ್ಯಂತ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದ್ದು, ಬಾಲಕಾರ್ಮಿಕ ಪದ್ಧತಿಯನ್ನು ನಿರ್ಮೂಲನೆ ಮಾಡಲು ಕಠಿಣವಾದ ಕ್ರಮಗಳನ್ನು ಕೈಗೊಂಡಿರುತ್ತದೆ. |
| ಆ | ಬೆಳಗಾವಿ ಜಿಲ್ಲೆಯಲ್ಲಿ ಹೋಟೆಲ್, ಅಂಗಡಿ, ಗ್ಯಾರೇಜ್ ಮುಂತಾದ ಹಲವಾರು ಕಡೆಗಳಲ್ಲಿ ಇಂದಿಗೂ ಕಾರ್ಯ ನಿರ್ವಹಿಸುತ್ತಿರುವ ಬಾಲಕಾರ್ಮಿಕರ ಸಂಖ್ಯೆ ಎಷ್ಟು; | ಬೆಳಗಾವಿ ಜಿಲ್ಲೆಯಲ್ಲಿ ಹೋಟೆಲ್, ಅಂಗಡಿ, ಗ್ಯಾರೇಜ್ ಮುಂತಾದ ಹಲವಾರು ಕಡೆಗಳಲ್ಲಿ 18 ಬಾಲಕಾರ್ಮಿಕರು ಕಾರ್ಯನಿರ್ವಹಿಸುತ್ತಿರುವುದು ಪತ್ತೆಯಾಗಿದ್ದು, ಸದರಿ ವಿವರಗಳು ಈ ಕೆಳಕಂಡಂತಿರುತ್ತದೆ;<br>ವರ್ಷ – ಪತ್ತೆಯಾದ ಬಾಲಕಾರ್ಮಿಕರ ಸಂಖ್ಯೆ<br>2017 – 06<br>2018 – 08<br>2019 – 04<br>ಒಟ್ಟು – 18 |
| ಇ | ಕಳೆದ ಮೂರು ವರ್ಷಗಳ ಅವಧಿಯಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಸದರಿ ಕಾನೂನಿನಡಿಯಲ್ಲಿ ಎಷ್ಟು ಪ್ರಕರಣಗಳನ್ನು ದಾಖಲಿಸಿಕೊಳ್ಳಲಾಗಿದೆ; | ಕಳೆದ ಮೂರು ವರ್ಷಗಳ ಅವಧಿಯಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ(ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986 ರನ್ವಯ 18 ಪ್ರಕರಣಗಳನ್ನು ದಾಖಲಿಸಲಾಗಿದ್ದು, ವಿವರಗಳು ಕೆಳಕಂಡಂತಿರುತ್ತದೆ;<br>ವರ್ಷ – ದಾಖಲಿಸಲಾದ ಪ್ರಕರಣಗಳ ಸಂಖ್ಯೆ<br>2017 – 06<br>2018 – 08<br>2019 – 04<br>ಒಟ್ಟು – 18 |

| | | |
|---|---|---|
| ಈ | ದಾಖಲಿಸಲಾದ ಇಂತಹ ಪ್ರಕರಣಗಳಲ್ಲಿ ಶಿಕ್ಷೆಗೆ ಒಳಪಡಿಸಿರುವ ಪ್ರಕರಣಗಳೆಷ್ಟು; | ಕಳೆದ ಮೂರು ವರ್ಷಗಳ ಅವಧಿಯಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಶಿಕ್ಷೆಗೆ ಒಳಪಡಿಸಿರುವ ಪ್ರಕರಣಗಳು ಕೆಳಕಂಡಂತಿರುತ್ತದೆ; |

| ವರ್ಷ | ಶಿಕ್ಷೆಯಾದ ಪ್ರಕರಣಗಳ ಸಂಖ್ಯೆ | ಷರಾ |
|---|---|---|
| 2017 | 06 | 06 ಮಕ್ಕಳು ಒಂದೇ ಸಂಸ್ಥೆಯಲ್ಲಿ ಕೆಲಸ ನಿರ್ವಹಿಸುತ್ತಿರುವುದರಿಂದ 1 ಪ್ರಕರಣ ಎಂದು ಪರಗಣಿಸಲಾಗಿದೆ. |
| 2018 | 08 | |
| 2019 | 02 | |

| | | |
|---|---|---|
| ಉ | ಕಾನೂನಿನಡಿಯಲ್ಲಿ ರಕ್ಷಣೆ ಮಾಡಲಾದ ಬಾಲಕಾರ್ಮಿಕ ಮಕ್ಕಳ ಪುನರ್ವಸತಿಗಾಗಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ರಾಜ್ಯ ಸರ್ಕಾರವು ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986 ಅನ್ನು ರಾಜ್ಯಾದ್ಯಂತ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದ್ದು, ಸದರಿ ಕಾನೂನಿನಡಿಯಲ್ಲಿ ರಕ್ಷಣೆ ಮಾಡಲಾದ ಬಾಲಕಾರ್ಮಿಕ ಮಕ್ಕಳ ಪುನರ್ವಸತಿಗಾಗಿ ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ;<br><br>1. ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986 ಕಲಂ 16 ಹಾಗೂ 17ರ ಅಡಿಯಲ್ಲಿ ನಿರೀಕ್ಷಕರಾಗಿ ಅಧಿಸೂಚಿಸಲ್ಪಟ್ಟ ಅಧಿಕಾರಿಗಳ ಹೋಬಳಿವಾರು ತಂಡವನ್ನು ರಚಿಸಿ, ಹಠಾತ್ ಹಾಗೂ ಯೋಜಿತ ದಾಳಿಗಳನ್ನು ನಡೆಸಿ, ಬಾಲಕಾರ್ಮಿಕರ ಪತ್ತೆ ಮಾಡಿ ನಂತರ ಅವರನ್ನು ಕೆಲಸದಿಂದ ಬಿಡುಗಡೆ ಮಾಡಿ ಕೆಲಸಕ್ಕೆ ನೇಮಕ ಮಾಡಿಕೊಂಡಿದ್ದ ಮಾಲೀಕರ ಮೇಲೆ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986 ಪ್ರಾವಧಾನಗಳನ್ವಯ ನಡೆಸಲಾಗುತ್ತದೆ.<br><br>2. ಕೆಲಸದ ಸ್ಥಳಗಳಿಂದ ನಿಯಮಾನುಸಾರ ಬಿಡುಗಡೆಗೊಂಡ ಬಾಲಕಾರ್ಮಿಕರನ್ನು ರಾಷ್ಟ್ರೀಯ ಬಾಲಕಾರ್ಮಿಕ ಯೋಜನೆ (ಎನ್.ಸಿ.ಎಲ್.ಪಿ) ಹಾಗೂ ರಾಜ್ಯ ಬಾಲಕಾರ್ಮಿಕ ಯೋಜನೆ (ಎಸ್.ಸಿ.ಎಲ್.ಪಿ)ಗಳಡಿಯಲ್ಲಿ ನಡೆಸಲಾಗುತ್ತಿರುವ ಬಾಲಕಾರ್ಮಿಕ ವಿಶೇಷ ತರಬೇತಿ ಕೇಂದ್ರಗಳಲ್ಲಿ, ವಿವಿಧ ಶೈಕ್ಷಣಿಕ ಪುನರ್ವಸತಿ ಕೇಂದ್ರಗಳಲ್ಲಿ ಹಾಗೂ ಮುಖ್ಯವಾಹಿನಿ ಶಾಲೆಗಳಲ್ಲಿ, ಮಕ್ಕಳ ಅರ್ಹತೆಗನುಗುಣವಾಗಿ ಮತ್ತು ಸ್ಥಳೀಯ ಅವಶ್ಯಕತೆಗನುಗುಣವಾಗಿ ದಾಖಲು ಮಾಡಲಾಗುತ್ತದೆ. |

| | | |
|---|---|---|
| | | 3. ಹೀಗೆ ಪುನರ್ವಸತಿಗೊಳಿಸಲಾದ ಮಕ್ಕಳಿಗೆ ಶಿಕ್ಷಣ, ಊಟ, ವಸತಿ, ಬಟ್ಟೆ, ಪಠ್ಯಪುಸ್ತಕಗಳ ವ್ಯವಸ್ಥೆ ಜೊತೆಗೆ ಆರೋಗ್ಯ ತಪಾಸಣೆಯನ್ನೂ ಸಹ ನಡೆಸುವ ಮೂಲಕ ಆರೋಗ್ಯದ ಹಿತರಕ್ಷಣೆಯನ್ನು ಮಾಡಲಾಗುತ್ತದೆ. ಕೆಲವೊಮ್ಮೆ ಶಾಲೆಯಿಂದ ಹೊರಗುಳಿದ ಮಕ್ಕಳೆಂದು ಪತ್ತೆಯಾದಲ್ಲಿ ನೇರವಾಗಿ ಮುಖ್ಯ ವಾಹಿನಿ ಶಾಲೆಗಳಿಗೆ ದಾಖಲಿಸುವ ಕಾರ್ಯವನ್ನು ಮಾಡಿಸಲಾಗುತ್ತಿದೆ.<br><br>4. ಬಾಲಕಾರ್ಮಿಕ ವಿಶೇಷ ತರಬೇತಿ ಕೇಂದ್ರಗಳಲ್ಲಿ ಪ್ರತಿಯೊಬ್ಬ ಮಗುವಿನ ಭಾವಚಿತ್ರವುಳ್ಳ ಹೆಲ್ತ್‌ಕಾರ್ಡ್‌ಗಳನ್ನು ನಿರ್ವಹಿಸಲಾಗುತ್ತದೆ ಮತ್ತು ಮಗುವಿನ ಆರೋಗ್ಯದ ಮಾಹಿತಿಯನ್ನು ಹೆಲ್ತಕಾರ್ಡ್‌ನಲ್ಲಿ ನಮೂದಿಸಲಾಗುತ್ತದೆ.<br><br>5. ಬಾಲ್ಯಾವಸ್ಥೆಯ ಹಾಗೂ ಕಿಶೊರಾವಸ್ಥೆಯ ಕಾರ್ಮಿಕ (ನಿಷೇಧ ಹಾಗೂ ನಿಯಂತ್ರಣ) ಕಾಯ್ದೆ, 1986ರ ಪರಿಷ್ಕೃತ ಕಾಯ್ದೆಯನ್ವಯ ಕಾಯ್ದೆಯ ಕಲಂ 14-ಃ "ಬಾಲಕಾರ್ಮಿಕ ಹಾಗೂ ಕಿಶೋರಕಾರ್ಮಿಕ ಪುನರ್ವಸತಿ ನಿಧಿ" ಅನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ ಎಲ್‌ಡಿ 124 ಸಿಎಲ್‌ಸಿ 2016, ಬೆಂಗಳೂರು, ದಿನಾಂಕ: 01/13/2019 ಅನ್ನು ಹೊರಡಿಸಿದ್ದು, ಎಲ್ಲಾ ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.<br><br>6. ಸರ್ಕಾರದ ಆದೇಶ ಸಂಖ್ಯೆ: ಎಲ್‌ಡಿ 86 ಸಿಎಲ್‌ಸಿ 2012, ದಿನಾಂಕ: 20-10-2012 ರನ್ವಯ ಬಾಲ ಕಾರ್ಮಿಕ ಪದ್ಧತಿಯನ್ನು ಪರಿಣಾಮಕಾರಿಯಾಗಿ ನಿರ್ಮೂಲನೆ ಮಾಡುವ ಸಲುವಾಗಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಲಹಾ ಸಮಿತಿ, ಕಾರ್ಯಕಾರಿ ಸಮಿತಿಗಳನ್ನು ಹಾಗೂ ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ಬಾಲ ಕಾರ್ಮಿಕತೆ ನಿರ್ಮೂಲನೆ ಹಾಗೂ ಪುನರ್ವಸತಿ ಸಮಿತಿಗಳನ್ನು ರಚಿಸಿ ಅಧಿಸೂಚನೆ ಹೊರಡಿಸಲಾಗಿರುತ್ತದೆ.<br><br>7. ಬಾಲಕಾರ್ಮಿಕ ಪದ್ಧತಿ(ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ಕ್ಕೆ 2016ರಲ್ಲಿ ಆಗಿರುವ ತಿದ್ದುಪಡಿಯನ್ನು ರಾಜ್ಯದಲ್ಲಿ ಸಮರ್ಪಕವಾಗಿ ಜಾರಿ ಮಾಡುವ ದಿಸೆಯಲ್ಲಿ ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರಡಿಯ ಬಾಲಕಾರ್ಮಿಕ(ನಿಷೇಧ ಮತ್ತು ನಿಯಂತ್ರಣ) (ಕರ್ನಾಟಕ) ತಿದ್ದುಪಡಿ ನಿಯಮಗಳು-2017 ಅನ್ನು ಕರ್ನಾಟಕ |

| | | |
|---|---|---|
| | | ಸರ್ಕಾರವು ಅಧಿಸೂಚನೆ ಸಂಖ್ಯೆ ಎಲ್ ಡಿ 113 ಸಿಎಲ್‌ಸಿ 2017(ಪಿ1) ಬೆಂಗಳೂರು, ದಿನಾಂಕ:04/10/2018 ರ ಮೂಲಕ ಕರ್ನಾಟಕ ರಾಜ್ಯಪತ್ರ ಸಂಪುಟ 153, ಸಂಚಿಕೆ 44 ದಿನಾಂಕ:08/11/2018 ರಲ್ಲಿ ಪ್ರಕಟಿಸಿದ್ದು, ಎಲ್ಲಾ ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. |

ಸಂಖ್ಯೆ: ಕಾಇ 38 ಸಿಎಲ್‌ಸಿ 2020

(ಅರಬೈಲ್ ಶಿವರಾಮ್ ಹೆಬ್ಬಾರ್)
ಕಾರ್ಮಿಕ & ಸಕ್ಕರೆ ಸಚಿವರು.